# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ದಿನಾಂಕ:- 14-01-2022 ರಂದು ಬೆಳಗ್ಗೆ:- 11.30 ಗಂಟೆಗೆ ಶ್ರೀ. ಶ್ರೀ ಶಿವಕುಮಾರ ಸ್ವಾಮೀಜಿ ಸಾರ್ವಜನಿಕ ಸೇವಾ ಸಂಕೀರ್ಣ ವಾರ್ಡ್ ಸಂಖ್ಯೆ 126 ಮಾರುತಿಮಂದಿರದಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.**

ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ಪರಿಣಾಮಕಾರಿಯಾಗಿ ಸೇವೆಗಳನ್ನು ಒದಗಿಸುವ ನಿಟ್ಟಿನಲ್ಲಿ ಪಾಲಿಕೆಯ ವಾರ್ಡ್ ಹಂತದಲ್ಲಿ ಸಮಿತಿಗಳನ್ನು ರಚಿಸುವ ಸಲುವಾಗಿ ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ:ಬಿ12(5)/ಪಿ.ಆರ್/35/2020-21/21-09-2020ರ ಆದೇಶದಂತೆ ನೊಡೆಲ್ ಅಧಿಕಾರಿಯನ್ನಾಗಿ ಶ್ರೀ. ಜಯಶಂಕರ್ ರೆಡ್ಡಿ, ಕಾರ್ಯಪಾಲಕ ಅಭಿಯಂತರರು, ರಸ್ತೆ ಮೂಲಸೌಕರ್ಯ, ಮಹದೇವಪುರ ವಿಭಾಗ, ಬಿ.ಬಿ.ಎಂ.ಪಿ ರವರನ್ನು ನೇಮಿಸಲಾಗಿದ್ದು, ಸದರಿ ಆದೇಶದಂತೆ ವಾರ್ಡ್ ಮಟ್ಟದಲ್ಲಿ ಸಾರ್ವಜನಿಕರಿಗೆ ಪ್ರಮುಖವಾದ ಮೂಲಭೂತ ಸೌಕರ್ಯಗಳಾದ ಘನತ್ಯಾಜ್ಯ ನಿರ್ವಹಣೆ, ನೀರು ಸರಬರಾಜು ಮತ್ತು ಒಳಚರಂಡಿ ಮತ್ತು ಇನ್ನಿತರ ಕಲ್ಯಾಣ ಕಾರ್ಯಕ್ರಮಗಳಂತಹ ಹಲವಾರು ಸೌಲಭ್ಯಗಳನ್ನು ಪರಿಣಾಮಕಾರಿಯಾಗಿ ಒದಗಿಸುವ ನಿಟ್ಟಿನಲ್ಲಿ ಮತ್ತು ಪಾಲಿಕೆಯ ಹಾಗೂ ಸಾರ್ವಜನಿಕರ ನಡುವೆ ಸಮನ್ವಯ ಸಾದಿಸುವ ನಿಟ್ಟಿನಲ್ಲಿ ಪಾಲಿಕೆಯ ವಾರ್ಡ್ ಹಂತದಲ್ಲಿ ಸಮಿತಿ ಸಭೆಗೆ ಈ ಕೆಳಕಂಡ ಅಧಿಕಾರಿ ವರ್ಗ/ಸದಸ್ಯರು ಮತ್ತು ಸ್ಥಳೀಯ ನಾಗರೀಕರು ಹಾಜರಾಗಿದ್ದರು.

**ಸಭೆಗೆ ಹಾಜರಿದ್ದ ಅಧಿಕಾರಿಗಳು ಮತ್ತು ಸದಸ್ಯರು:-**

| ಕ್ರ. ಸಂ | ಹೆಸರು | ಮೊಬೈಲ್ ಸಂಖ್ಯೆ |
|---|---|---|
| 1 | ನೊಡೆಲ್ ಅಧಿಕಾರಿ: ಶ್ರೀ. ಜಯಶಂಕರ್ ರೆಡ್ಡಿ, ಕಾರ್ಯಪಾಲಕ ಅಭಿಯಂತರರು, ರಸ್ತೆ ಮೂಲಸೌಕರ್ಯ, ಮಹದೇವಪುರ ವಿಭಾಗ, ಬಿ.ಬಿ.ಎಂ.ಪಿ. | 9741697632 |
| 2 | ಕಾರ್ಯದರ್ಶಿ ಮತ್ತು ಸಂಚಾಲಕರು<br>ಶ್ರೀ. ರವಿರಾಜ್ ಎಸ್. ಪಿ, ಸಹಾಯಕ ಅಭಿಯಂತರರು, ವಾರ್ಡ್ ನಂ.126 | 9980764000 |
| 3 | ಶ್ರೀ. ತಿಮ್ಮಪ್ಪ, RI- Ward no.126, Maruthimandira. | 9480685657 |
| 4 | ಶ್ರೀ. ಲಕ್ಷ್ಮಿ ನರಸಿಂಹಯ್ಯ, ತೋಟಗಾರಿಕೆ ಅಧಿಕಾರಿ, ಚಂದ್ರಾಬಡಾವಣೆ. | 9845257299 |
| 5 | ಶ್ರೀ. ರಂಗದಾಮಯ್ಯ, ಕಾರ್ಯ ನಿರ್ವಾಹಕರು, ಮಾರುತಿಮಂದಿರ. | 9880376090 |
| 6 | ಶ್ರೀ. ರಮೇಶ್. ಆರ್, Junior Health Inspector, ChandraLayout. | 9206687122 |
| 7 | ಶ್ರೀಮತಿ. ಅಕ್ಷತ ರಾಜ್. ಬಿ, ಆರೋಗ್ಯಾಧಿಕಾರಿ, ಪ್ರಾಥಮಿಕ ಆರೋಗ್ಯ ಕೇಂದ್ರ, ಮೂಡಲಪಾಳ್ಯ. | 7829365614 |
| 8 | ಶ್ರೀ. ಜಯಕುಮಾರ್. ಎಸ್.ಪಿ. ಪ್ರಾಥಮಿಕ ಆರೋಗ್ಯ ಕೇಂದ್ರ, ಮೂಡಲಪಾಳ್ಯ. | 8139988884 |
| 9 | ಶ್ರೀ. ಸಂತೋಷ್ ಕುಮಾರ್. (RWA -PF Layout)- ಸದಸ್ಯರು | 8050741006 |
| 10 | ಶ್ರೀಮತಿ. ರೇವತಿ. ಎಮ್- ಸಾರ್ವಜನಿಕರು | 9632112539 |
| 11 | ಶ್ರೀ. ಶಿವಶಂಕರ್. ಎ. ಎಂ. (RWA - Vinayaka Layout)- ಸದಸ್ಯರು | 9448055204 |
| 12 | ಶ್ರೀ. ಗಿರೀಶ್. ಎಮ್.ಎನ್ -ಸದಸ್ಯರು. | 8310604590 |

*****

ದಿನಾಂಕ: 14-01-2022 ರಂದು ಬೆಳಿಗ್ಗೆ 11.30 ಗಂಟೆಗೆ ನಡೆಸಲಾದ ವಾರ್ಡ್ ಮಟ್ಟದ ಸಾರ್ವಜನಿಕರ ಕುಂದು ಕೊರತೆಗಳನ್ನು ನಿವಾರಿಸುವ ನಿಟ್ಟಿನಲ್ಲಿ ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ನಿರ್ವಹಿಸುವ ಸಂಬಂಧ ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲಾಗಿ ಮೊದಲಿಗೆ ಹಾಜರಿದ್ದ, ಅಧ್ಯಕ್ಷರಿಗೆ ಸ್ವಾಗತವನ್ನು ಕೋರುತ್ತಾ ಹಾಗೂ ಸಭೆಗೆ ಹಾಜರಾದ ಎಲ್ಲಾ ಇಲಾಖೆಯ ಅಧಿಕಾರಿ ವರ್ಗದವರಿಗೆ ಮತ್ತು ಸ್ಥಳೀಯ ಸದಸ್ಯರು ಮತ್ತು ನಾಗರಿಕರಿಗೆ ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

## <u>ಚರ್ಚಿಸಲಾದ ವಿಷಯಗಳ ವಿವರಗಳು:-</u>

1. ಶ್ರೀ. ಶಿವಶಂಕರ್. ಎ. ಎಂ. (RWA – Vinayaka Layout)- ಸದಸ್ಯರು ರವರು ಮಾತನಾಡುತ್ತಾ,

   - ವಾರ್ಡ್‌ನ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕೋವಿಡ್ ಬೂಸ್ಟರ್ ಡೋಸ್ ಲಸಿಕೆ ನೀಡುತ್ತಿರುವ ಬಗ್ಗೆ ವಿವರಗಳನ್ನು ಸಭೆಯಲ್ಲಿ ಕೇಳಿದರು.

     **<u>ಕ್ರಮ:</u>** ಸಭೆಯಲ್ಲಿ ಹಾಜರಿದ್ದ ಶ್ರೀಮತಿ. ಅಕ್ಷತ ರಾಜ್. ಬಿ, ಆರೋಗ್ಯಾಧಿಕಾರಿ, ಪ್ರಾಥಮಿಕ ಆರೋಗ್ಯ ಕೇಂದ್ರ, ಮೂಡಲಪಾಳ್ಯ ಇವರು ಕೋವಿಡ್ ಬೂಸ್ಟರ್ ಡೋಸ್ ಲಸಿಕೆಯ ಬಗ್ಗೆ ವಿವರಗಳನ್ನು ಸಭೆಯಲ್ಲಿಯೇ ನೀಡಲಾಯಿತು ಮತ್ತು 15–18 ನೇ ವರ್ಷದ ಮಕ್ಕಳಿಗೆ ಕೋವಿಡ್ –19 ಲಸಿಕೆ ನೀಡುತ್ತಿರುವ ಬಗ್ಗೆಯೂ ಸಹ ಸಭೆಯಲ್ಲಿ ತಿಳಿಸಿದರು.

   - ವಿನಾಯಕ ಬಡಾವಣೆಯ 1ನೇ ಮುಖ್ಯರಸ್ತೆಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರು ರಸ್ತೆ ಅಗೆದಿರುವುದನ್ನು ಡಾಂಬರೀಕರಣ ಮಾಡಿ ಪೂರ್ಣಗೊಳಿಸುವುದರ ಬಗ್ಗೆ ಕೇಳಿದರು.

     **<u>ಕ್ರಮ:</u>** ಸಭೆಯಲ್ಲಿ ಹಾಜರಿದ್ದ ಶ್ರೀ. ರವಿರಾಜ್ ಎಸ್. ಪಿ, ಸಹಾಯಕ ಅಭಿಯಂತರರು, ವಾರ್ಡ್ ನಂ.126 ರವರು ಈಗಾಗಲೇ ಕಾಮಗಾರಿಯು ಪ್ರಗತಿಯಲ್ಲಿದ್ದು ಡಾಂಬರೀಕರಣ ಆದಷ್ಟು ಬೇಗ ಪೂರ್ಣ ಮಾಡಿ ಕೊಡುತ್ತೇವೆ ಎಂದು ತಿಳಿಸಿದರು.

2. ಶ್ರೀಮತಿ. ರೇವತಿ - ಸದಸ್ಯರು ರವರು ಮಾತನಾಡುತ್ತಾ,

   - ಕೋವಿಡ್‌ನಿಂದ ಮೃತರಾದವರ ಕುಟುಂಬಗಳಿಗೆ ಸರ್ಕಾರದಿಂದ ನೀಡಲಾಗುತ್ತಿರುವ ಕೋವಿಡ್ ಪರಿಹಾರ ನಿಧಿ ಸಮರ್ಪಕವಾಗಿ ವಿತರಣೆಯಾಗುತ್ತಿಲ್ಲದಿರುವ ಬಗ್ಗೆ ಪ್ರಸ್ತಾಪಿಸಿದರು.

     **<u>ಕ್ರಮ:</u>** ಹಿರಿಯ ಆರೋಗ್ಯ ಪರಿವೀಕ್ಷಕರು, ಚಂದ್ರಾಬಡಾವಣೆ. (Ph.No: 9480484746)/ MOH Govindarajanagara (Ph.No: 9380171812)

   - ವಾರ್ಡ್‌ನ ವಿವಿಧ ಪ್ರದೇಶಗಳ ರಸ್ತೆ ಬದಿ ಮತ್ತು ಪಾದಚಾರಿ ಮಾರ್ಗಗಳಲ್ಲಿ ಅನಧಿಕೃತವಾಗಿ ವಾಹನ ನಿಲುಗಡೆ ಮಾಡಿರುವುದನ್ನು ತೆರವುಗೊಳಿಸುವ ಬಗ್ಗೆ.

     **<u>ಕ್ರಮ:</u>** ಟ್ರಾಫಿಕ್ ಪೋಲಿಸ್ ಅಧಿಕಾರಿಗಳು, ಚಂದ್ರಬಡಾವಣೆ.

3. ಶ್ರೀ. ಗಿರೀಶ್. ಎಮ್.ಎನ್ –ಸದಸ್ಯರು ರವರು ಮಾತನಾಡುತ್ತಾ,

   - ಜಿ.ಕೆ.ಡಬ್ಲ್ಯೂ ಬಡಾವಣೆಯ ಬಸ್ ನಿಲ್ದಾಣದ ಬಳಿ ಇರುವ ಶೌಚಾಲಯ ಶುಚಿತ್ವ ಇಲ್ಲದಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

     **<u>ಕ್ರಮ:</u>** ಸಹಾಯಕ ಕಾರ್ಯಪಾಲಕ ಅಭಿಯಂತರರು, ಎಸ್.ಡಬ್ಲ್ಯೂ.ಎಮ್. (Ph.No: 9538202886)

ಈ ಸಂಬಂಧ ಸೂಕ್ತ ಕ್ರಮ ಕೈಗೊಳ್ಳಲು ಸಂಬಂಧ ಪಟ್ಟ ಇಲಾಖೆಗೆ ತಿಳಿಸಲು ನೋಡೆಲ್ ಅಧಿಕಾರಿಗಳು ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್ ನಂ.126 ರವರಿಗೆ ಸೂಚಿಸಲಾಯಿತು.

ಈ ಮೇಲ್ಕಂಡ ಎಲ್ಲಾ ವಿಷಯಗಳನ್ನು ಹಾಗೂ ಸಮಸ್ಯೆಗಳನ್ನು ಬರುವ ಮುಂದಿನ ಸಭೆಯೊಳಗಾಗಿ ನಿವಾರಣೆ ಮಾಡಿ ಅನುಪಾಲನೆ ವರದಿಯನ್ನು ಸಂಬಂದಪಟ್ಟ ಅಧಿಕಾರಿಗಳು ಕಳುಹಿಸಿಕೊಡಬೇಕಾಗಿ ಈ ಮೂಲಕ ಸೂಚಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ ಮತ್ತು ಸಂಚಾಲಕರು
ವಾರ್ಡ್ ಸಂಖ್ಯೆ.126

ವಾರ್ಡ್ ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ.126

ಪ್ರತಿಯನ್ನು:

1) ಮಾನ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
2) ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರ ಅವಗಾಹನೆಗೆ ಸಲ್ಲಿಸಿದೆ.
3) ಮಾನ್ಯ ವಿಶೇಷ ಆಯುಕ್ತರು (ಘನತ್ಯಾಜ್ಯ) ರವರ ಅವಗಾಹನೆಗೆ ಸಲ್ಲಿಸಿದೆ.
4) ಜಂಟಿ ಆಯುಕ್ತರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸಿದೆ.
5) ಮುಖ್ಯಅಭಿಯಂತರರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸಿದೆ.
6) ಅಧೀಕ್ಷಕ ಅಭಿಯಂತರರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸಿದೆ.
7) ಕಾರ್ಯಪಾಲಕ ಅಭಿಯಂತರರು (ಗೋವಿಂದರಾಜನಗರ) ವಿಭಾಗರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.